# ಕರ್ನಾಟಕ ವಿಧಾನ ಪರಿಷತ್ತು

ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಮಂಜುನಾಥ್ ಭಂಡಾರಿ ಇವರು ನಿಯಮ-72 ರ ಮೇರೆಗೆ ಮಂಡಿಸಿರುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.

***

**ವಿಷಯ:** ಗ್ರಾಮೀಣ ಪ್ರದೇಶದಲ್ಲಿ ನಾಗರೀಕ ನೋಂದಣಿ ಪದ್ಧತಿಯನ್ನು ಬಲಪಡಿಸಲು ಹಾಗೂ ಸಂಭವಿಸುವ ಶೇ 100 ರಷ್ಟು ಜನನ-ಮರಣ ಘಟನೆಗಳನ್ನು ದಾಖಲಿಸಲು ಜನನ -ಮರಣ ನೋಂದಣಿ ಅಧಿನಿಯಮ 1969 ರ 7(1) ಅನ್ವಯ ಗ್ರಾಮ ಲೆಕ್ಕಾಧಿಕಾರಿಗಳ ಬದಲಾಗಿ ಸಂಬಂಧಿಸಿದ ಗ್ರಾಮ ಪಂಚಾಯತಿಯ ಅಭಿವೃದ್ಧಿ ಅಧಿಕಾರಿಗಳನ್ನು ಜನನ-ಮರಣ ನೋಂದಣಾಧಿಕಾರಿಗಳಾಗಿ ನೇಮಿಸಿ ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯವು ಕಳೆದ ಜನವರಿ 2022 ರಂದು ಆದೇಶ ಹೊರಡಿಸಿದೆ. ಅದೇ ರೀತಿ ವಿವಾಹ ನೊಂದಣಾಧಿಕಾರಿಗಳಾಗಿಯೂ ನೇಮಿಸಿ ಆದೇಶ ಹೊರಡಿಸಲಾಗಿದೆ. ಈ ಬಗ್ಗೆ ಕಂದಾಯ ಇಲಾಖೆಯು ಪೂರಕ ಆದೇಶವನ್ನು ಹೊರಡಿಸಿದೆ.

ಆದರೆ, ಇಲಾಖೆಗಳ ನಡುವಿನ ಹೊಂದಾಣಿಕೆಯ ಕೊರತೆಯಿಂದ ಈವರೆಗೆ ಗ್ರಾಮ ಪಂಚಾಯತಿಗಳಲ್ಲಿ ಪ್ರಮಾಣ ಪತ್ರ ವಿತರಣೆಗೆ ಹಸಿರು ನಿಶಾನೆ ತೋರುತ್ತಿಲ್ಲ. ಗ್ರಾಮೀಣ ಭಾಗದ ಜನರು ಯಾವುದೇ ಒಂದು ಮಗು ಜನಿಸಿದಾಗ ಅಥವಾ ಯಾವುದೇ ವ್ಯಕ್ತಿ ಮರಣ ಹೊಂದಿದಾಗ ದೂರದ ನಾಡ ಕಛೇರಿಗೋ, ತಾಲ್ಲೂಕು ಕಛೇರಿಗೋ ಹೋಗಿ ನೋಂದಣಿ ಮಾಡಿ ಪ್ರಮಾಣ ಪತ್ರ ಪಡೆಯಬೇಕಾಗಿರುತ್ತದೆ. ಇದರಿಂದ ಗ್ರಾಮೀಣ ಜನರ ಸಮಯ ಹಾಗೂ ಹಣ ವ್ಯಯವಾಗುತ್ತಿದೆ. ಜನರ ಮೇಲಿನ ಈ ಹೊರೆಯನ್ನು ತಪ್ಪಿಸಲು ಗ್ರಾಮ ಪಂಚಾಯತಿಗಳಿಗೆ ಅಧಿಕಾರ ನೀಡಿ ಆದೇಶಿಸಿದ್ದರೂ ಈವರೆಗೆ ಕಾರ್ಯರೂಪಕ್ಕೆ ಬಂದಿಲ್ಲ.

ಆದ್ದರಿಂದ ಗ್ರಾಮ ಪಂಚಾಯತಿಯ ಪಂಚತಂತ್ರ-2 ತಂತ್ರಾಂಶದಲ್ಲಿ ಸೂಕ್ತ ಮಾರ್ಪಾಡುಗಳನ್ನು ಮಾಡುವ ಮೂಲಕ ಜನನ-ಮರಣ ಪ್ರಮಾಣ ಪತ್ರ ಮತ್ತು ವಿವಾಹ ನೋಂದಣಿ ಪತ್ರ ವಿತರಣೆಗೆ ಅವಕಾಶ ಮಾಡಿಕೊಟ್ಟು ಹಾಗೂ ಹೆಚ್ಚುವರಿ ಡಾಟಾ ಎಂಟ್ರಿ ಆಪರೇಟರ್ ನ್ನು ನೀಡಿದಲ್ಲಿ ಗ್ರಾಮೀಣ ಸ್ಥಳೀಯ ಸರ್ಕಾರಗಳು ಜನಸ್ನೇಹಿಯಾಗಿ ಕಾರ್ಯನಿರ್ವಹಿಸಲು ಸಾಧ್ಯವಾಗುತ್ತದೆ ಎಂಬ ಬಗ್ಗೆ.

**ಉತ್ತರ:** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 58(1-ಎ) (1) (vii) ರಲ್ಲಿ ಗ್ರಾಮ ಪಂಚಾಯತಿಗಳು ಜನನ ಮತ್ತು ಮರಣಗಳ ತ್ವರಿತ ನೋಂದಣಿ ಮತ್ತು ಅದನ್ನು ವರದಿ ಮಾಡುವುದನ್ನು ಖಚಿತಪಡಿಸಿಕೊಳ್ಳುವ ಕರ್ತವ್ಯವನ್ನು ಹೊಂದಿರುತ್ತವೆ.

ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಸರ್ಕಾರದ ಆದೇಶ ಸಂಖ್ಯೆ:ಪಿಡಿಎಸ್. 02 ಎಸ್‌ಎಸ್ ಎಂ 2022, ದಿನಾಂಕ:22-02-2022 ರಲ್ಲಿ ಗ್ರಾಮೀಣ ಪ್ರದೇಶದಲ್ಲಿ ನಾಗರೀಕ ನೋಂದಣಿ ಪದ್ಧತಿಯನ್ನು ಬಲಪಡಿಸಲು ಜನನ ಮರಣ ನೋಂದಣಿ ಅಧಿನಿಯಮ 1969ರ ಪ್ರಕರಣ 7(1) ರನ್ವಯ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ಜನನ ಮರಣ ನೋಂದಣಾಧಿಕಾರಿಗಳನ್ನಾಗಿ ನೇಮಿಸಲಾಗಿದೆ.

ಇ-ಜನ್ಮ ತಂತ್ರಾಂಶದಲ್ಲಿ ನೋಂದಾಯಿಸಿದ ಜನನ ಮತ್ತು ಮರಣ ಪ್ರಮಾಣ ಪತ್ರಗಳ ಪ್ರತಿಗಳನ್ನು ಬಾಪೂಜಿ ಸೇವಾ ಕೇಂದ್ರಗಳ ಮೂಲಕ ವಿತರಿಸಲಾಗುತ್ತಿದೆ. ಇ-ಜನ್ಮ ತಂತ್ರಾಂಶದಲ್ಲಿ ಪ್ರತಿಗಳನ್ನು ವಿತರಿಸುವ ಬಗ್ಗೆ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಡಾಟಾ ಎಂಟ್ರಿ ಆಪರೇಟರ್‌ಗಳಿಗೆ ಆನ್‌ಲೈನ್ ಮೂಲಕ ತರಬೇತಿಯನ್ನು ನೀಡಲಾಗಿದೆ. ಇ-ಜನ್ಮ ತಂತ್ರಾಂಶವನ್ನು ಪಂಚತಂತ್ರ 2.0 ತಂತ್ರಾಂಶದೊಂದಿಗೆ ಸಂಯೋಜನೆಗೊಳಿಸಲು ಕ್ರಮ ವಹಿಸಲಾಗುತ್ತಿದೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಕರ್ನಾಟಕ ವಿವಾಹಗಳ (ನೋಂದಣಿ ಮತ್ತು ವಿವಿಧ ನಿಬಂಧನೆಗಳು) ಕಾಯಿದೆ, 1976 (ಕರ್ನಾಟಕ ಅಧಿನಿಯಮ 2, 1984) ರ ಕಲಂ 4(1) ರಡಿಯಲ್ಲಿ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ ಹಾಗೂ ಅಧಿಸೂಚನೆ ಸಂಖ್ಯೆ WCD 100 SWW 2006, ದಿನಾಂಕ:07-11-2007 ಅನ್ನು ಮುಂದುವರಿಸಿ, ಕರ್ನಾಟಕ ಸರ್ಕಾರವು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಯನ್ನು ಗ್ರಾಮ ಪಂಚಾಯತ್ ಹಂತದ ವಿವಾಹ ನೋಂಂದಣಾಧಿಕಾರಿಗಳನ್ನಾಗಿ ನೇಮಿಸಿದ ಅಧಿಸೂಚನೆಯನ್ನು ದಿನಾಂಕ: 16.04.2022 ರಂದು ಹೊರಡಿಸಲಾಗಿದೆ.

ಒಳಾಡಳಿತ ಇಲಾಖೆಯು ಈ ಹಿಂದೆ ದಿನಾಂಕ:04-07-1966 ರಂದು ಅಧಿಸೂಚನೆಯನ್ನು ಹೊರಡಿಸಿ ಎಲ್ಲಾ ಜಿಲ್ಲೆಯ ಸಬ್ ರಿಜಿಸ್ಟ್ರಾರ್‌ಗಳನ್ನು ವಿವಾಹ ನೋಂದಣಾಧಿಕಾರಿಗಳನ್ನಾಗಿ ನೇಮಿಸಿರುವ ಕಾರಣ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ Hindu Marriage (Karnataka) Rules 1966 & The Special Marriage Act 1954 ರ ಸೆಕ್ಷನ್ 3 ರ ಅಡಿಯಲ್ಲಿ ವಿವಾಹ ಕಾಯ್ದೆ ನೋಂದಾಣಾಧಿಕಾರಿಗಳ ಅಧಿಕಾರವನ್ನು ವಿಸ್ತರಿಸಿ ಅಧಿಸೂಚನೆ ಹೊರಡಿಸಲು ಒಳಾಡಳಿತ ಇಲಾಖೆಯ ಸಹಮತಿ ಪಡೆಯಲು ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. ಒಳಾಡಳಿತ ಇಲಾಖೆಯ ಸಹಮತಿ ಸ್ವೀಕೃತವಾದ ನಂತರ ಗ್ರಾಮ ಪಂಚಾಯತಿ ಹಂತದಲ್ಲಿ ವಿವಾಹ ನೋಂದಣಿ ಪ್ರಮಾಣ ಪತ್ರವನ್ನು ವಿತರಿಸಲು ಕ್ರಮ ವಹಿಸಲಾಗುವುದು.

ಸಂಖ್ಯೆ:RDPR 313 GPA 2023

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.